ಸದರಿ ಆಸ್ಪತ್ರೆಗೆ ಈ ಹೊಸದಾಗಿ 8 ವೈದ್ಯರು ಹಾಗೂ 6 ಶುಶ್ರೂಷಕರ ಹುದ್ದೆ ಹೆಚ್ಚುವರಿಯಾಗಿ ಮಂಜೂರಾಗಿದ್ದು, ಸಿಬ್ಬಂದಿಗಳ ನೇಮಕ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು ಶೀಘ್ರದಲ್ಲಿಯೇ ಕ್ರಮ ಕೈಗೊಳ್ಳಲಾಗುವುದು

610 (523) ಶ್ರೀ ಮಾಮನಿ ವಿಶ್ವನಾಥ ಕರಿಬಸಪ್ಪ (ಪರಸಗಡ) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಇನಾಮಹೊಂಗಲ ಮತ್ತು ಯಡಹಳ್ಳಿ ಗ್ರಾಮದಲ್ಲಿ ಗ್ರಾಮೀಣ ಪಶು ಚಿಕಿತ್ಸಾಲಯಗಳು ಹಾಗೂ ಅವುಗಳಿಗೆ ಕಟ್ಟಡಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ಗ್ರಾಮಗಳಲ್ಲಿ ಗ್ರಾಮೀಣ ಪಶು ಚಿಕಿತ್ಸಾಲಯ ಮಂಜೂರಾತಿಗಾಗಿ ಪ್ರಸ್ತಾವನೆಯನ್ನು ಸಲ್ಲಿಸಿರುವುದು ನಿಜವಲ್ಲವೇ?

ಇ) ಹಾಗಿದ್ದಲ್ಲಿ, ಈ ಪ್ರಸ್ತಾವನೆಯು ಯಾವ ಹಂತದಲ್ಲಿದೆ ಹಾಗೂ ಯಾವಾಗ ಮಂಜೂರಾತಿ ನೀಡಲಾಗುವುದು?

ಶ್ರೀ ರೇವು ನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು)

ಅ) – ಬಂದಿದೆ –

ಆ) ಹೌದು, ನಿಜ

ಇ) ರಾಷ್ಟ್ರೀಯ ಕೃಷಿ ಆಯೋಗ 1984ರ ಮೇರೆಗೆ ಪ್ರತಿ 5000 ಜಾನುವಾರು ಘಟಕಗಳಿಗೆ ಒಂದು ಪಶು ಚಿಕಿತ್ಸಾಲಯ ಇರಬೇಕು ಸವದತ್ತಿ ತಾಲ್ಲೂಕಿನಲ್ಲಿ 98,914 ಜಾನುವಾರು ಘಟಕಗಳಿದ್ದು, 20 ಪಶು ಚಿಕಿತ್ಸಾಲಯಗಳು ಇರಬೇಕಿತ್ತು ಆದರೆ ಈಗಾಗಲೇ 31 ಪಶುವೈದ್ಯ ಸಂಸ್ಥೆಗಳಿವೆ ಆದ್ದರಿಂದ ಹೊಸ ಪಶು ಚಿಕಿತ್ಸಾಲಯ ತೆರೆಯುವ ಪ್ರಶ್ನೆ ಉದ್ಭವಿಸುವುದಿಲ್ಲ

611 (524) ಶ್ರೀ ಮಾಮನಿ ವಿಶ್ವನಾಥ ಕರಬಸಪ್ಪ (ಪರಸಗಡ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಲು ಸಲ್ಲಿಸಿದ್ದ ಪ್ರಸ್ತಾವನೆಗೆ ಸರ್ಕಾರ ಕೈಗೊಂಡ ಕ್ರಮವೇನು?

ಆ) ಹಾಗಿದ್ದಲ್ಲಿ ಈವರೆವಿಗೆ ಮಂಜೂರಾದ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು?

ಇ) ಹಾಗಿಲ್ಲದಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಈ ವರ್ಷದ ಆಯವ್ಯಯದ ಮಿತಿಯಲ್ಲಿ ಇದನ್ನು ಪರಿಗಣಿಸಲಾಗಿರುವುದಿಲ್ಲ

ಆ) ಅನ್ವಯಿಸುವುದಿಲ್ಲ

ಇ) ಮುಂದೆ ಆಯವ್ಯಯದಲ್ಲಿ ಒದಗಿಸುವ ಅನುದಾನದ ಲಭ್ಯತೆ ಅನುಸರಿಸಿ ರಾಜ್ಯದ ಇತರೆ ಬೇಡಿಕೆಗಳೊಂದಿಗೆ ಪರಿಶೀಲಿಸಿ ಮಂಜೂರು ಮಾಡಲು ಪರಿಶೀಲಿಸಲಾಗುವುದು

612 (1062) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟಾ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟಾ ತಾಲ್ಲೂಕಿನ ಆರೋಗ್ಯ ಇಲಾಖೆಯಲ್ಲಿ ವೈದ್ಯರು ಹಾಗೂ ಇನ್ನೂ ಅನೇಕ ಸಿಬ್ಬಂದಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಹುದ್ದೆಗಳನ್ನು ನೇಮಕ ಮಾಡದಿರುವುದರಿಂದ ಸಾರ್ವಜನಿಕರಿಗೆ ಸೇವೆ ಒದಗಿಸುವಲ್ಲಿ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಈ) ಯಾವಾಗ ಸದರಿ ಹುದ್ದೆಗಳನ್ನು ಭರ್ತಿ ಪಡಿಸಲಾಗುವುದು

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ

ಆ) ಸಾರ್ವಜನಿಕರಿಗೆ ತೊಂದರೆಯಾಗದಂತೆ ಚಿಕಿತ್ಸೆಯನ್ನು ನೀಡಲಾಗುತ್ತಿದೆ

ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಖಾಯಂ ಆಗಿ 500 ವೈದ್ಯಾಧಿಕಾರಿಗಳನ್ನು ಎರಡು ಹಂತಗಳಲ್ಲಿ ವಿಶೇಷ ನೇಮಕಾತಿ